## ಬೆಂಗಳೂರು ವಿಶ್ವವಿದ್ಯಾಲಯ ವಿಭಜನೆ

**175(571); ಶ್ರೀ ಅರವಿಂದ ಲಿಂಬಾವಳಿ (ಮಹದೇವಪುರ)**

ಅ) ಬೆಂಗಳೂರು ವಿಶ್ವವಿದ್ಯಾಲಯವನ್ನು ವಿಭಜಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ;

ಆ) ಹಾಗಿದ್ದಲ್ಲಿ, ಎಷ್ಟು ವಿಶ್ವವಿದ್ಯಾಲಯಗಳನ್ನು ರಚಿಸಲಾಗುವುದು; ಅವುಗಳ ಭೌಗೋಳಿಕ ವಿಸ್ತೀರ್ಣವೇನು;

ಇ) ಸದರಿ ವಿಭಜಿತ ವಿಶ್ವವಿದ್ಯಾಲಯಗಳು ಯಾವಾಗ ಕಾರ್ಯಾರಂಭಗೊಳ್ಳಲಿವೆ?

**ಶ್ರೀ ಆರ್.ವಿ. ದೇಶಪಾಂಡೆ (ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು)**

ಅ) ಹೌದು

ಆ) **ಮತ್ತು** ಇ) ಈ ಬಗ್ಗೆ ರಚಿಸಿರುವ ಸಚಿವ ಸಂಪುಟದ ಉಪಸಮಿತಿಯು ಪರಿಶೀಲಿಸುತ್ತಿದೆ.

## ಬಯಲು ರಂಗ ಮಂದಿರ ನಿರ್ಮಾಣ

**176(502); ಶ್ರೀ ಬಾಲಕೃಷ್ಣ ಸಿ.ಎನ್. (ಶ್ರವಣಬೆಳಗೊಳ)**

ಅ) ಚನ್ನರಾಯಪಟ್ಟಣದಲ್ಲಿ ಬಯಲು ರಂಗಮಂದಿರ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಚನ್ನರಾಯಪಟ್ಟಣದಲ್ಲಿ ಬಯಲು ರಂಗಮಂದಿರ ನಿರ್ಮಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ;

ಇ) ಹೊಸ ಬಯಲು ರಂಗಮಂದಿರ ನಿರ್ಮಾಣಕ್ಕಾಗಿ ಸರ್ಕಾರ ಸ್ಥಳ ಗುರುತಿಸಿದೆಯೇ;

ಈ) ಹಾಗಿದ್ದಲ್ಲಿ ಪಟ್ಟಣದ ಯಾವ ಭಾಗದಲ್ಲಿ ಸ್ಥಳ ಗುರುತಿಸಲಾಗಿದೆ ಹಾಗೂ ನಿರ್ಮಾಣಕ್ಕಾಗಿ ನಿಗಧಿಪಡಿಸಿರುವ ಅನುದಾನದ ಮೊತ್ತವೆಷ್ಟು (ವಿವರ ನೀಡುವುದು)?

**ಶ್ರೀಮತಿ ಉಮಾಶ್ರೀ (ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು)**

ಅ) ಹೌದು

ಆ) ಬಯಲು ರಂಗಮಂದಿರ ನಿರ್ಮಿಸಲು ಅನುದಾನದ ನೆರವು ಕೋರಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಲ್ಲಿ ಮನವಿ ಸ್ವೀಕೃತವಾಗಿದ್ದು, ಅನುದಾನದ ಮಿತಿಯಲ್ಲಿ ಧನಸಹಾಯ ನೀಡುವ ಬಗ್ಗೆ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು.

ಇ) **ಮತ್ತು ಈ)** ಬಯಲು ರಂಗಮಂದಿರ ನಿರ್ಮಾಣಕ್ಕೆ ಸ್ಥಳ ಗುರುತಿಸಿ ವರದಿ ನೀಡಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಿಲ್ಲಾ ಸಹಾಯಕ ನಿರ್ದೇಶಕರಿಗೆ ಈಗಾಗಲೇ ತಿಳಿಸಲಾಗಿದೆ. ಮಾರ್ಗಸೂಚಿ ನಿಯಮಾನುಸಾರ ಬಯಲು ರಂಗಮಂದಿರ ನಿರ್ಮಾಣಕ್ಕೆ ರೂ. 10.00 ಲಕ್ಷಗಳವರೆಗೆ ಮಂಜೂರು ಮಾಡಲು ಅವಕಾಶವಿದೆ.

**ಕುಡಿಯಲು ಯೋಗ್ಯವಲ್ಲದ ನೀರಿರುವ ಯೋಜನೆಗಳು**

**181(448); ಶ್ರೀ ಬಾಲಕೃಷ್ಣ ಹೆಚ್.ಸಿ. (ಮಾಗಡಿ)**

ಅ) ಮಾಗಡಿ ಕ್ಷೇತ್ರ ವ್ಯಾಪ್ತಿಯಲ್ಲಿ ಕುಡಿಯಲು ಯೋಗ್ಯವಿಲ್ಲದ ನೀರಿರುವ ಗ್ರಾಮಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಅಂತಹ ಗ್ರಾಮಗಳು ಯಾವುವು;

ಇ) ಕುಡಿಯಲು ಯೋಗ್ಯವಿಲ್ಲದ ನೀರಿರುವ ಗ್ರಾಮಗಳಲ್ಲಿ ಶುದ್ಧೀಕರಣ ಘಟಕಗಳನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಶುದ್ಧೀಕರಣ ಘಟಕಗಳನ್ನು ಯಾವ ಕಾಲಮಿತಿಯಲ್ಲಿ ಸ್ಥಾಪಿಸಲಾಗುವುದು?